**Prajavani**

**Date:** November 14, 2014 **Page No.** 03

**Edition:** Mysore **Language: Kannada**





ಮೈಸೂರಿನ ಧರ್ಮಸ್ಥಳ ಮಂಜುನಾಥೇಶ್ವರ ನಿರ್ವಹಣೆ ಅಭಿವೃದ್ಧಿ ಸಂಸ್ಥೆಯಲ್ಲಿ ಗುರುವಾರ ಏರ್ಪಡಿಸಿದ್ದ 'ಸಾಂಸ್ಥಿಕ ಸಾಮಾಜಿಕ ಹೊಣೆಗಾರಿಕೆ– ಪ್ರಗತಿಗಾಗಿ ಇರುವ ವಿಧಾನಗಳು ಮತ್ತು ಆಚರಣೆಗಳು' ಕುರಿತ ಸಮ್ಮೇಳನದಲ್ಲಿ ಟಾಟಾ ಕನ್ಸಲ್ಟಿಂಗ್ ಎಂಜಿನಿಯರ್ಸ್ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಜೆ.ಪಿ. ಹರನ್ ಮಾತನಾಡಿದರು (ಎಡಚಿತ್ರ), ಮೈಸೂರಿನ ಧರ್ಮಸ್ಥಳ ಮಂಜುನಾಥೇಶ್ವರ ನಿರ್ವಹಣೆ ಅಭಿವೃದ್ಧಿ ಸಂಸ್ಥೆಯಲ್ಲಿ ಗುರುವಾರ ಏರ್ಪಡಿಸಿದ್ದ ಸಮ್ಮೇಳನದಲ್ಲಿ ಪಾಲ್ಗೊಂಡಿದ್ದ ಸಭಿಕರು

# 'ಉದ್ದೇಶಿತ ಸಮುದಾಯಕ್ಕೆ ಸೌಲಭ್ಯ ತಲುಪಿಸಿ'

**ಪ್ರಜಾವಾಣಿ ವಾರ್ತೆ**

ಮೈಸೂರು: ಸಾಂಸ್ಥಿಕ ಸಾಮಾಜಿಕ ಹೊಣೆಗಾರಿಕೆಯಡಿ ವಿನಿಯೋಗಿಸುವ ಹಣವು ಸದ್ಬಳಕೆಯಾದಾಗ ಮಾತ್ರ ಉದ್ದೇಶ ಸಾರ್ಥಕವಾಗುತ್ತದೆ ಎಂದು ಟಾಟಾ ಕನ್ಸಲ್ಟಿಂಗ್ ಎಂಜಿನಿಯರ್ಸ್ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಜೆ.ಪಿ. ಹರನ್ ಅಭಿಪ್ರಾಯಪಟ್ಟರು.

ನಗರದ ಧರ್ಮಸ್ಥಳ ಮಂಜುನಾಥೇಶ್ವರ ನಿರ್ವಹಣೆ ಅಭಿವೃದ್ಧಿ ಸಂಸ್ಥೆಯಲ್ಲಿ ಗುರುವಾರ ಏರ್ಪಡಿಸಿದ್ದ 'ಸಾಂಸ್ಥಿಕ ಸಾಮಾಜಿಕ ಹೊಣೆಗಾರಿಕೆ– ಪ್ರಗತಿಗಾಗಿ ಇರುವ ವಿಧಾನಗಳು ಮತ್ತು ಆಚರಣೆಗಳು' ಕುರಿತ ಸಮ್ಮೇಳನದಲ್ಲಿ ಅವರು ಮಾತನಾಡಿದರು.

ಸಂಸ್ಥೆಗಳು ಸಾಂಸ್ಥಿಕ ಸಾಮಾಜಿಕ ಹೊಣೆಗಾರಿಕೆಯಡಿ ನೀಡುವ ಸೌಲಭ್ಯಗಳು ಉದ್ದೇಶಿತ ಸಮುದಾಯಕ್ಕೆ ತಲುಪುವಂತೆ ನೋಡಿಕೊಳ್ಳಬೇಕು. ಪರಿಸರ ಮಾಲಿನ್ಯ ಮೊದಲಾದ ಅಂಶಗಳನ್ನು ಗಮನದಲ್ಲಿ ಇಟ್ಟುಕೊಂಡು ಅಭಿವೃದ್ಧಿ ಕಾರ್ಯಕ್ರಮಗಳನ್ನು ಕೈಗೊಳ್ಳಬೇಕು. ಸಾಮಾಜಿಕ ಸಂರಚನೆಯನ್ನು ಗಮನದಲ್ಲಿ ಇಟ್ಟುಕೊಂಡು ಯೋಜನೆಗಳನ್ನು ರೂಪಿಸಬೇಕು ಎಂದು ಸಲಹೆ ನೀಡಿದರು.

ಸಂಸ್ಥೆಯ ಪ್ರತಿಮಾ ನಿರ್ಮಾಣದಲ್ಲಿ ಸಾಂಸ್ಥಿಕ ಸಾಮಾಜಿಕ ಹೊಣೆಗಾರಿಕೆ ಕಾರ್ಯಕ್ರಮಗಳು ಸಾಥ್ ನೀಡುತ್ತವೆ. ಪ್ರಾದೇಶಿಕ ಚೌಕಟ್ಟು, ಅಲ್ಲಿನ ಸಮುದಾಯದವರ ಸಂಸ್ಕೃತಿ ಮೊದಲಾದವನ್ನು ತಿಳಿದುಕೊಂಡು ಯೋಜನೆ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಬೇಕು. ಹಣವು ಎಲ್ಲ ಸಂತೃಪ್ತಿಯನ್ನು ದಯಪಾಲಿಸುತ್ತದೆ ಎಂಬ ಧೋರಣೆ ಇರಬಾರದು. ಕಾರ್ಯವೊಂದನ್ನು ಕೈಗೊಂಡ ನಂತರ ಅದನ್ನು ಮೌಲ್ಯಮಾಪನ ಮಾಡಿ, ಪ್ರಗತಿಯನ್ನು ಪರಿಶೀಲಿಸಬೇಕು ಎಂದು ಹೇಳಿದರು.

ಅಭಿವೃದ್ಧಿ ಕೆಲಸಗಳನ್ನು ಕೈಗೊಂಡಾಗ ಗುಣಮಟ್ಟಕ್ಕೆ ಆದ್ಯತೆ ನೀಡಬೇಕು. ಕಳಪೆ ಕಾಮಗಾರಿ ಮಾಡಿದರೆ ಮಾಡಿದ ಕೆಲಸವು ವ್ಯರ್ಥವಾಗುತ್ತದೆ. ಅಲ್ಲದೇ, ವ್ಯತಿರಿಕ್ತ ಪರಿಣಾಮಗಳು ಉಂಟಾಗುವ ಸಾಧ್ಯತೆ ಇರುತ್ತದೆ. ಪ್ರವಾಹ, ಬರ ಮೊದಲಾದ ವಿಪತ್ತು ನಿರ್ವಹಣೆ ಸಂದರ್ಭದಲ್ಲಿ ಸಂಸ್ಥೆಗಳು ಸಾಂಸ್ಥಿಕ ಸಾಮಾಜಿಕ ಹೊಣೆಗಾರಿಕೆಯಡಿ ಪುನರ್ವಸತಿ, ಆಹಾರ ಪೂರೈಕೆ ಮೊದಲಾದವನ್ನು ಕೈಗೊಂಡು ಸಮುದಾಯದ ಅಭಿವೃದ್ಧಿಗೆ ಸರ್ಕಾರದೊಂದಿಗೆ ಕೈಜೋಡಿಸಬಹುದು ಎಂದರು.

ಸಾಂಸ್ಥಿಕ ಸಾಮಾಜಿಕ ಹೊಣೆಗಾರಿಕೆಯಡಿ ರೂಪಿಸುವ ಯೋಜನೆಗಳನ್ನು ನಿಶ್ಚಿತ ಸಮುದಾಯಕ್ಕೆ ತಲುಪಿಸುವ ನಿಟ್ಟಿನಲ್ಲಿ, ಕಾರ್ಯಕ್ರಮ ಆಯೋಜನೆ ನಿಟ್ಟಿನಲ್ಲಿ ಸರ್ಕಾರೇತರ ಸಂಸ್ಥೆಗಳ (ಎನ್‌ಜಿಒ) ಸಹಕಾರವನ್ನು ಪಡೆಯುವುದು ಒಳಿತು ಎಂದರು. ಸರ್ಕಾರೇತರ ಸಂಸ್ಥೆಗಳಿಗೆ ಸಮುದಾಯಗಳ ಅಗತ್ಯಗಳ ಅರಿವು ಇರುತ್ತದೆ. ಸಮುದಾಯದ ಸಬಲೀಕರಣವು ಸಾಂಸ್ಥಿಕ ಸಾಮಾಜಿಕ ಹೊಣೆಗಾರಿಕೆಯ ಧ್ಯೇಯವಾಗಿರಬೇಕು ಎಂದು ಹೇಳಿದರು.

ಧರ್ಮಸ್ಥಳ ಮಂಜುನಾಥೇಶ್ವರ ನಿರ್ವಹಣೆ ಅಭಿವೃದ್ಧಿ ಸಂಸ್ಥೆ ನಿರ್ದೇಶಕ ಡಾ.ಎನ್.ಆರ್. ಪರಶುರಾಮನ್, ಡಾ.ಎಂ.ಆರ್. ಸುರೇಶ್, ಡಾ.ಎಚ್. ಗಾಯತ್ರಿ, ಪ್ರೊ.ಗೋವಿಂದ ಶರ್ಮ ಇತರರು ಇದ್ದರು.